# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14(ಎ) ಅಡಿಯಲ್ಲಿ ಮಾನ್ಯ ಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಕಂಪ್ಲೇಂಟ್ / ಲೋಕ್ / ಬಿಜಿಎಂ / 1611 / 2021 / PO ARE-17 (Presenting Officer section), ದಿನಾಂಕ: 01.02.2021.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರದ ಜೊತೆಯಲ್ಲಿ ಲಗತ್ತಿಸಿರುವ ಮಾನ್ಯಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ:18.01.2022 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಭಗವಾನ್ ಮಯ್ಯಪ್ಪಾ ನಾಯ್ಕ, ಗುತ್ತಿಗೆದಾರ, ಸಾ: ಮೆಣಸಿ, ಹಲಗೇರಿ, ಸಿದ್ದಾಪುರ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪುತ್ತಾರೆ) ರವರು ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ ಆರೋಪಕ್ಕೆ ಸಂಬಂಧಿಸಿದಂತೆ ದೂರು ನೀಡಿದ್ದು, ದೂರಿಗೆ ಸಂಬಂಧಿಸಿದಂತೆ ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಉತ್ತರ ಕನ್ನಡ ಜಿಲ್ಲೆ ರವರು ತನಿಖೆ ನಡೆಸಿ ಸಲ್ಲಿಸಿರುವ ತನಿಖಾ ವರದಿಯನ್ವಯ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು 4 ನೇ ದರ್ಜೆ ಗುತ್ತಿಗೆದಾರರಾಗಿದ್ದು, ಸಿದ್ದಾಪುರ ತಾಲ್ಲೂಕಿನ ಹಲಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2017-18 ನೇ ಸಾಲಿನ ಹೇಮಗಾರ ಎಸ್.ಸಿ ಕೇರಿಯ ಸಾರ್ವಜನಿಕ ಬಾವಿ ದುರಸ್ತಿ ಹಾಗೂ ಮೆಣಸಿಯಿಂದ ಕುಳಿಬೀಡು ಎಸ್.ಸಿ ಕೇರಿಗೆ ರಸ್ತೆ ಸುಧಾರಣೆ ಕಾಮಗಾರಿ ಮಾಡಿದ್ದು, ಬಾವಿ ದುರಸ್ತಿ ಚೆಕ್ ರೂ 16,712/-, ರಸ್ತೆ ಸುಧಾರಣೆ ಮಾಡಿದ ಚೆಕ್ ರೂ 7,236/- ಇವುಗಳನ್ನು ನೀಡಲು ಎದುರುದಾರರು ರೂ. 5,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುವ ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ (ಹಂಗಾಮಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಇವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರರು ಕೋರಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ದಿನಾಂಕ: 24.07.2018 ರಂದು ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರ ಕೊಠಡಿಯಲ್ಲಿ ದೂರುದಾರರಿಂದ ಲಂಚದ ಹಣವನ್ನು ಪಡೆದಿರುವುದು ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಉತ್ತರ ಕನ್ನಡ ಜಿಲ್ಲೆ ರವರು ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳಲ್ಲಿ ಎದುರುದಾರರ ಮೇಲಿನ ಆರೋಪವು ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡುಬಂದಿರುತ್ತದೆ.

ಸದರಿ ಆರೋಪಕ್ಕೆ ಸಂಬಂಧಿಸಿದಂತೆ ಎದುರುದಾರರು ದಿನಾಂಕ: 04.08.2021 ರಂದು ಸಮಜಾಯಿಷಿಯನ್ನು ಸಲ್ಲಿಸಿದ್ದು, ದೂರುದಾರರು ನನಗೆ ಪರಿಚಯವಿದ್ದು, ಅವರು ಮೊಬೈಲ್ ರಿಪೇರಿ ಅಂಗಡಿ ನಡೆಸುತ್ತಿದ್ದು, ನನ್ನ ಮೊಬೈಲ್ ರಿಪೇರಿ ಮಾಡುವಂತೆ ತಿಳಿಸಿ, ಮುಂಗಡವಾಗಿ ಹಣ ಪಾವತಿ ಮಾಡಿರುತ್ತೇನೆ. ದೂರುದಾರರು ಸರಿಯಾಗಿ ರಿಪೇರಿ ಮಾಡದ ಕಾರಣ ಮುಂಗಡ ಹಣವನ್ನು ನೀಡುವಂತೆ ನಾನು ಕೋರಿದ್ದು, ಇದರಿಂದ ಅವರಿಗೂ, ನನಗೂ ಮನಸ್ತಾಪ ಉಂಟಾಗಿ, ನಾನು ನೀಡಿದ ಮುಂಗಡ ಹಣವನ್ನು ನೀಡಿ, ಲಂಚದ ಹಣ ಎಂದು ದೂರಿರುತ್ತಾರೆ. ಇವರ ಆರೋಪಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಆದರಿಂದ ಈ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೋರಿರುತ್ತಾರೆ.

..2

ಮುಂದುವರೆದು, ಎದುರುದಾರರು ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರು ನೀಡಿರುವ ಸಮಜಾಯಿಷಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬಂದಿರುವುದಿಲ್ಲ. ಸಾಕ್ಷಿಗಳ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು ಎದುರುದಾರರ ಸತಕವಾದ ದುರ್ನಡತೆಯನ್ನು ತೋರಿಸುತ್ತದೆ. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲೆಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕಾರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ / ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಎದುರುದಾರರು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1)(i) ರಿಂದ (iv) ರ ಅಡಿಯಲ್ಲಿ ದುರ್ನಡತೆ / ದುರ್ವತನೆ ಕಂಡುಬರುವುದರಿಂದ ಎದುರುದಾರರಾದ ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವೆ ನಿಯಮ 1957 ರ ನಿಯಮ14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರಿಗೆ ವಹಿಸಬೇಕೆಂದು ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿದೆ, ಸದರಿ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸದರಿ ಪ್ರಕರಣದಲ್ಲಿನ ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ ಇವರ ವಿರುದ್ಧದ ಲಂಚ ಸ್ವೀಕರಿಸಿದ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/27/ಗ್ರಾಪಂಕಾ/2022, ಬೆಂಗಳೂರು,</u>**

**<u>ದಿನಾಂಕ: 21.03.2022</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ ಇವರ ವಿರುದ್ಧ ಲಂಚ ಸ್ವೀಕರಿಸಿದ ಆರೋಪದ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ)ರಡಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/3/22

**(ರಾಜು ಎಂ.ಎಂ)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u> 1**. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.

(6)

2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. **(ಪುಟ: 01 ರಿಂದ 90 ರವರೆಗೆ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉತ್ತರಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಸಿದ್ದಾಪುರ, ಉತ್ತರಕನ್ನಡ ಜಿಲ್ಲೆ.
   ಶ್ರೀ ಶೈಲೇಶ ಕುಮಾರ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಹಲಗೇರಿ ಗ್ರಾಮ ಪಂಚಾಯಿತಿ, ಸಿದ್ದಾಪುರ ತಾಲ್ಲೂಕು, ಉತ್ತರಕನ್ನಡ ಜಿಲ್ಲೆ. (ಇವರಿಗೆ **ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಸಿದ್ದಾಪುರ, ಉತ್ತರಕನ್ನಡ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ.ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.